ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಒಂಭತ್ತನೇ ಅಧಿವೇಶನ

(ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 16ನೇ ಮಾರ್ಚ್, 2021

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹನ್ನೊಂದನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹನ್ನೊಂದನೇ ಪಟ್ಟಿ

2. ವರದಿಯನ್ನೊಪ್ಪಿಸುವುದು

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಅಧ್ಯಕ್ಷರು, ಅಧೀನ ಶಾಸನ ರಚನಾ ಸಮಿತಿ) ಅವರು 2019-20 ಮತ್ತು 2020-21ನೇ ಸಾಲಿನ ಅಧೀನ ಶಾಸನ ರಚನಾ ಸಮಿತಿಯ ಐವತ್ತನೇ ವರದಿಯನ್ನೊಪ್ಪಿಸುವುದು.

3. ವಿತ್ತೀಯ ಕಾರ್ಯಕಲಾಪಗಳು

2021-22ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ.

4. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

ಶ್ರೀ ಬಿ.ಎಸ್.ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:-

ಅ) 2021ನೇ ಸಾಲಿನ ಕರ್ನಾಟಕ ಕೃಷ್ಣ ಜಲಾನಯನ ಪ್ರದೇಶಾಭಿವೃದ್ಧಿ ಪ್ರಾಧಿಕಾರ (ನಿರಸನಗೊಳಿಸುವ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ಕೆ.ಆರ್. ರಮೇಶ್ ಕುಮಾರ್, ಕೃಷ್ಣಬೈರೇಗೌಡ, ಡಾ. ಅಜಯ್ ಧರ್ಮಸಿಂಗ್, ಹೆಚ್.ಪಿ. ಮಂಜುನಾಥ್ ಹಾಗೂ ಇತರರು** – ರಾಜ್ಯದಲ್ಲಿ ಪೆಟ್ರೋಲ್, ಡೀಸಲ್, ಅಡುಗೆ ಅನಿಲ ಮತ್ತು ಜೀವನಾವಶ್ಯಕ ವಸ್ತುಗಳ ಬೆಲೆ ಏರಿಕೆಯನ್ನು ತಡೆಗಟ್ಟುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಬಂಡೆಪ್ಪ ಖಾಶೆಂಪೂರ್, ಕೆ.ಎಂ. ಶಿವಲಿಂಗೇಗೌಡ, ಆರ್. ಮಂಜುನಾಥ್ ಹಾಗೂ ಇತರರು** – ಮಾಯನೂರು ಜಲಾಶಯವನ್ನು ಗುಂಡಾರು, ದಕ್ಷಿಣ ವೆಲ್ಲೂರು ಮತ್ತು ವೈಗಾಯಿ ನದಿಗಳೊಂದಿಗೆ ಜೋಡಣೆ ಮಾಡುವ ನಿರ್ಮಾಣ ಕಾರ್ಯದಿಂದಾಗಿ ಉಂಟಾಗಿರುವ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

3) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಕೆ.ಎಂ. ಶಿವಲಿಂಗೇಗೌಡ, ಹೆಚ್.ಕೆ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಅಶ್ವಿನ್ ಕುಮಾರ್ ಎಂ. ಹಾಗೂ ಇತರರು** – ರಾಜ್ಯದಲ್ಲಿ ಸ್ಥಗಿತಗೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ಒದಗಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

6. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

ಶ್ರೀ ಎಸ್.ಟಿ. ಸೋಮಶೇಖರ್ (ಮಾನ್ಯ ಸಹಕಾರ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಸೊಸೈಟಿಗಳ ನೋಂದಣಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

7. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಅಭಯ ಪಾಟೀಲ ಅವರು** – ಬೆಂಗಳೂರು–ಪುಣೆ ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿರುವ ಸರ್ಕಾರಿ ಜಮೀನಿನಲ್ಲಿ ಮಾದರಿ ಬಹುತಾಂತ್ರಿಕ ಐ.ಟಿ. ಪಾರ್ಕ್ ಸ್ಥಾಪಿಸಲು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ) ಗಮನ ಸೆಳೆಯುವುದು.

2) **ಶ್ರೀ ಡಿ.ಸಿ. ತಮ್ಮಣ್ಣ ಅವರು** – ಮದ್ದೂರು ಪಟ್ಟಣ ಪರಿಮಿತಿಯಲ್ಲಿ ಮೂಲಸೌಕರ್ಯಗಳನ್ನು ಒದಗಿಸಲು ಗುತ್ತಿಗೆದಾರರಿಗೆ ಕಾರ್ಯಾದೇಶ ನೀಡಿರುವ ಕಾಮಗಾರಿಗಳಿಗೆ ಹಣ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

3) **ಶ್ರೀ ಕೆ. ಮಹದೇವ್ ಅವರು** – ಪಿರಿಯಾಪಟ್ಟಣ ತಾಲ್ಲೂಕಿನ ಗಿರಿಜನ ಹಾಡಿಗಳ ಬುಡಕಟ್ಟು ಜನರಿಗೆ ಮೂಲಭೂತ ಸೌಕರ್ಯ ಒದಗಿಸಲು ಎಸ್.ಸಿ.ಪಿ. ಹಾಗೂ ಟಿ.ಎಸ್.ಪಿ. ಅನುದಾನ ಮಂಜೂರು ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

4) **ಶ್ರೀ ಕೆ.ಆರ್. ರಮೇಶ್ ಕುಮಾರ್ ಅವರು** – ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರದ ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿರುವುದರಿಂದ ಕೊಳವೆ ಬಾವಿಗಳನ್ನು ಕೊರೆಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

5) **ಶ್ರೀಮತಿ ಸೌಮ್ಯ ರೆಡ್ಡಿ ಅವರು** – ಬೆಂಗಳೂರು ನಗರ ಸರ್ಕಾರಿ ಶಾಲೆಗಳಲ್ಲಿನ ಅವ್ಯವಸ್ಥೆಯನ್ನು ಸರಿಪಡಿಸಿ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

6) **ಶ್ರೀ ಅಶ್ವಿನ್ ಕುಮಾರ್ ಎಂ. ಅವರು** – ಟಿ. ನರಸೀಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ರೈತರು ಬೆಳೆದ ಭತ್ತಕ್ಕೆ ಬೆಂಬಲ ಬೆಲೆಯು ಪಾವತಿಯಾಗದೇ ಇರುವುದರಿಂದ ರೈತರು ಅನುಭವಿಸುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

7) **ಡಾ. ಅಂಜಲಿ ಹೇಮಂತ್ ನಿಂಬಾಳ್ಕರ್ ಅವರು** – ಖಾನಾಪುರ ಮತಕ್ಷೇತ್ರದ ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಗಳಿಗೆ ಖಾಯಂ ಶಿಕ್ಷಕರನ್ನು ನೇಮಿಸುವುದು ಹಾಗೂ ಶಾಲಾ ಕಟ್ಟಡಗಳನ್ನು ಸುಸಜ್ಜಿತವಾಗಿ ಪುನರ್ ನಿರ್ಮಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

8) **ಶ್ರೀ ಸಿದ್ದು ಸವದಿ ಅವರು** – ರೈತರ ಅನುಕೂಲಕ್ಕಾಗಿ ಸಸಾಲಟ್ಟಿ ಏತ ನೀರಾವರಿ ಯೋಜನೆಯನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

9) **ಶ್ರೀ ಅಮರೇಗೌಡ ಲಿಂಗನಗೌಡ ಪಾಟೀಲ್ ಬಯ್ಯಾಪುರ ಅವರು** – ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಗೆ ಸದಸ್ಯರನ್ನು ನೇಮಕ ಮಾಡುವುದು ಹಾಗೂ ಹಣ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರ ಗಮನ ಸೆಳೆಯುವುದು.

10) **ಶ್ರೀ ಸಿ.ಎಂ. ನಿಂಬಣ್ಣವರ್ ಅವರು** – ದಾಂಡೇಲಿ–ಧಾರವಾಡ–ಹೆಬಸೂರ–ನವಲಗುಂದ ಅಣ್ಣಿಗೇರಿವರೆಗಿನ ರಾಜ್ಯ ಹೆದ್ದಾರಿಯಲ್ಲಿ ರೈಲ್ವೇ ಗೇಟ್‌ಗೆ ಮೇಲ್ಸೇತುವೆ ನಿರ್ಮಿಸಿ, ರಾಜ್ಯ ಹೆದ್ದಾರಿಯನ್ನು ಉನ್ನತೀಕರಿಸಿ ರಾಷ್ಟ್ರೀಯ ಹೆದ್ದಾರಿಯನ್ನಾಗಿ ಅಭಿವೃದ್ಧಿಗೊಳಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಲೋಕೋಪಯೋಗಿ) ಗಮನ ಸೆಳೆಯುವುದು.

11) **ಶ್ರೀ ಪ್ರಿಯಾಂಕ್ ಖರ್ಗೆ ಅವರು** – ಕಲಬುರಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ಮೇದಕ ಗ್ರಾಮದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ನಿರ್ದೇಶನಗಳನ್ನು ಉಲ್ಲಂಘಿಸಿರುವ ರಾಯಲ್ ಫ್ಯಾಮಿಲಿ ರಿಕ್ರಿಯೇಷನ್ ಮತ್ತು ಕಲ್ಚರಲ್ ಕ್ಲಬ್ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

12) **ಶ್ರೀ ಹೆಚ್.ಹಾಲಪ್ಪ ಅವರು** – ಸಾಗರ ಹಾಗೂ ಹೊಸ ನಗರ ತಾಲ್ಲೂಕುಗಳ ವಿವಿಧ ಗ್ರಾಮೀಣ ಪ್ರದೇಶಗಳಲ್ಲಿ ನೆಟ್ ವರ್ಕ್ ಸಂಪರ್ಕ ಇಲ್ಲದಿರುವುದರಿಂದ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಆಗುತ್ತಿರುವ ಅನಾನುಕೂಲದ ಬಗ್ಗೆ ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

13) **ಶ್ರೀ ಸಿ.ಎನ್. ಬಾಲಕೃಷ್ಣ ಅವರು** – ಶ್ರವಣಬೆಳಗೊಳ ಮತಕ್ಷೇತ್ರ ವ್ಯಾಪ್ತಿಯ ನುಗ್ಗೇಹಳ್ಳಿ ಮತ್ತು ಚನ್ನರಾಯಪಟ್ಟಣ ಅಮಾನಿಕೆರೆ ಏತ ನೀರಾವರಿ ಯೋಜನೆಗೆ ರೈತರ ಕೃಷಿ ಜಮೀನುಗಳನ್ನು ಸ್ವಾಧೀನ ಪಡಿಸಿಕೊಂಡಿದ್ದು, ಸದರಿ ಜಮೀನಿನ ಮಾಲೀಕರುಗಳಿಗೆ ಪರಿಹಾರ ನೀಡುವಲ್ಲಿ ಆಗುತ್ತಿರುವ ವಿಳಂಬದ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm